# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 280 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 06-03-2025 |
| ಉತ್ತರಿಸಬೇಕಾದವರು | ಸನ್ಮಾನ್ಯ ಮುಖ್ಯಮಂತ್ರಿಯವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯದ ಪ್ರವೇಶ ದೊರೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="3">ಇಲ್ಲ<br>• ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ಅವರು ಕೋರಿರುವ ವಿದ್ಯಾರ್ಥಿನಿಲಯಗಳಲ್ಲಿ ಅಥವಾ ಸಮೀಪದಲ್ಲಿರುವ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಕಲ್ಪಿಸಲು ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 124 ಪಕವಿ 2019, ದಿನಾಂಕ:17.07.2019ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿದ್ದು, ಅದರಂತೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.<br>• ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಒಟ್ಟು 270 ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿದ್ದು, 2024-25ನೇ ಸಾಲಿನಲ್ಲಿ 29867 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದ್ದು, ಒಟ್ಟಾರೆ 23,938 ಮಂಜೂರಾತಿ ಸಂಖ್ಯೆಗೆ ಎದುರಾಗಿ, 5,929 ವಿದ್ಯಾರ್ಥಿಗಳಿಗೆ ಹೆಚ್ಚುವರಿಯಾಗಿ ಪ್ರವೇಶ ನೀಡಲಾಗಿರುತ್ತದೆ.</td></tr>
<tr><td>ಆ)</td><td>ಬಂದಿದ್ದಲ್ಲಿ 2024-25ನೇ ಸಾಲಿನಲ್ಲಿ ಎಷ್ಟು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ ದೊರೆತಿರುವುದಿಲ್ಲ; (ಸಂಪೂರ್ಣ ಮಾಹಿತಿ ಒದಗಿಸುವುದು)</td></tr>
<tr><td>ಇ)</td><td>ವಿದ್ಯಾರ್ಥಿ ನಿಲಯದ ಪ್ರವೇಶ ಸೌಲಭ್ಯ ದೊರೆಯದೆ ಇರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td></tr>
<tr><td>ಈ)</td><td>ವಿದ್ಯಾರ್ಥಿಗಳಿಗೆ ಭೋಜನಾ ವೆಚ್ಚಕ್ಕಾಗಿ ಪ್ರತಿ ತಿಂಗಳು ನೀಡುತ್ತಿರುವ ದರವು ಸಾಕಾಗುತ್ತದೆಯೇ; ಇಲ್ಲದಿದ್ದಲ್ಲಿ ದರವನ್ನು ಪರಿಷ್ಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?</td><td>2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ ಭೋಜನಾ ವೆಚ್ಚದ ದರವನ್ನು ಮಾಸಿಕ ಪ್ರತಿ ವಿದ್ಯಾರ್ಥಿಗೆ ರೂ.100/-ರಂತೆ ಹೆಚ್ಚಿಸಿ, ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ರೂ.1,750/- ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ರೂ.1,850/- ರ ದರಗಳಲ್ಲಿ ಉತ್ತಮ ಗುಣಮಟ್ಟದ ಆಹಾರವನ್ನು ನೀಡಲಾಗುತ್ತಿದೆ.</td></tr>
</table>

**STW/SECB/STP/106/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ